ಮಹಿಳೆಯರ ಸುರಕ್ಷತೆಗೆ ಟೊಂಕ ಕಟ್ಟಿದ 'ಅಕ್ಕ ಪಡೆ': ಏನಿದು ಯೋಜನೆ?

ಮಹಿಳೆಯರ ರಕ್ಷಣೆ ಮತ್ತು ಜಾಗೃತಿಗೆ 'ಅಕ್ಕ ಪಡೆ' ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ

ಬೀದರ್: ರಾಜ್ಯದಲ್ಲಿ ಮಹಿಳೆಯರು ಮತ್ತು ಹೆಣ್ಣುಮಕ್ಕಳ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿರುವ ರಾಜ್ಯ ಸರ್ಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಜಂಟಿ ಸಹಯೋಗದಲ್ಲಿ ಜಾರಿಗೆ ತಂದಿರುವ ಮಹತ್ವಾಕಾಂಕ್ಷೆಯ 'ಅಕ್ಕ ಪಡೆ' ಯೋಜನೆ ಇದೀಗ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಿಸ್ತರಿಸುತ್ತಿದ್ದು, ಅದರ ಭಾಗವಾಗಿ ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಕ್ಕ ಪಡೆ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ನೀಡಿದರು. ಮಹಿಳೆಯರ ರಕ್ಷಣೆ, ಸಬಲೀಕರಣ ಮತ್ತು ಸಾಮಾಜಿಕ ಜಾಗೃತಿ ಮೂಡಿಸುವ ಉದ್ದೇಶದಿಂದ ಆರಂಭಗೊಂಡಿರುವ ಈ ಯೋಜನೆಗೆ ಸ್ಥಳೀಯ ಮಹಿಳೆಯರು ಹಾಗೂ ವಿವಿಧ ಸಂಘಟನೆಗಳಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

2023ರಲ್ಲಿ ರಾಜ್ಯ ಸರ್ಕಾರ 'ಅಕ್ಕ ಪಡೆ' ಯೋಜನೆಯನ್ನು ಆರಂಭಿಸಿದ್ದು, ಮಹಿಳೆಯರು ಮತ್ತು ಹೆಣ್ಣುಮಕ್ಕಳ ಸುರಕ್ಷತೆಯನ್ನು ಮತ್ತಷ್ಟು ಬಲಪಡಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಮಹಿಳೆಯರ ಮೇಲಿನ ದೌರ್ಜನ್ಯ, ಕಿರುಕುಳ, ಕೌಟುಂಬಿಕ ಹಿಂಸೆ, ಸೈಬರ್ ಅಪರಾಧ ಸೇರಿದಂತೆ ವಿವಿಧ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ವಿಶೇಷ ಕಾರ್ಯಪಡೆಯಾಗಿ 'ಅಕ್ಕ ಪಡೆ' ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟಕ್ಕೆ ಸಿಲುಕಿರುವ ಮಹಿಳೆಯರಿಗೆ ತಕ್ಷಣ ನೆರವು ನೀಡುವುದರ ಜೊತೆಗೆ, ಸಮಾಜದಲ್ಲಿ ಮಹಿಳೆಯರ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯವನ್ನೂ ಈ ತಂಡ ಕೈಗೊಳ್ಳುತ್ತಿದೆ.

ಅಕ್ಕ ಪಡೆಯ ಪ್ರಮುಖ ಜವಾಬ್ದಾರಿಗಳಲ್ಲಿ ಶಾಲೆಗಳು, ಕಾಲೇಜುಗಳು, ಬಸ್ ನಿಲ್ದಾಣಗಳು, ಸಾರ್ವಜನಿಕ ಸ್ಥಳಗಳು ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಗಸ್ತು ತಿರುಗಿ ಹೆಣ್ಣುಮಕ್ಕಳಿಗೆ ಕಿರುಕುಳ ನೀಡುವ ಕಿಡಿಗೇಡಿಗಳ ಮೇಲೆ ನಿಗಾ ಇಡುವುದು ಪ್ರಮುಖವಾಗಿದೆ. ಮಹಿಳೆಯರು ತುರ್ತು ಸಂದರ್ಭಗಳಲ್ಲಿ ಕರೆ ಮಾಡಿದ ಕೂಡಲೇ ಸ್ಥಳಕ್ಕೆ ಧಾವಿಸಿ ಅಗತ್ಯ ನೆರವು ನೀಡುವುದು, ಪೊಲೀಸ್ ಇಲಾಖೆ ಹಾಗೂ ಸಂಬಂಧಿತ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆ ಪರಿಹರಿಸುವ ಕೆಲಸವನ್ನೂ ಈ ತಂಡ ನಿರ್ವಹಿಸುತ್ತದೆ.

ಇದರ ಜೊತೆಗೆ ಗ್ರಾಮೀಣ ಪ್ರದೇಶಗಳಲ್ಲಿ ಮಹಿಳೆಯರಿಗೆ ಕೌಟುಂಬಿಕ ದೌರ್ಜನ್ಯ, ಬಾಲ್ಯ ವಿವಾಹ, ಸೈಬರ್ ಅಪರಾಧ, ಮಾನವ ಕಳ್ಳಸಾಗಣೆ, ಮೂಢನಂಬಿಕೆ, ಮಹಿಳಾ ಮತ್ತು ಮಕ್ಕಳ ಹಕ್ಕುಗಳು ಹಾಗೂ ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಮಹಿಳೆಯರಲ್ಲಿ ಆತ್ಮವಿಶ್ವಾಸ ಬೆಳೆಸುವುದು ಮತ್ತು ತಮ್ಮ ಸಮಸ್ಯೆಗಳ ಬಗ್ಗೆ ಧೈರ್ಯವಾಗಿ ಧ್ವನಿ ಎತ್ತುವಂತೆ ಪ್ರೇರೇಪಿಸುವ ಕೆಲಸವನ್ನೂ 'ಅಕ್ಕ ಪಡೆ' ಮಾಡುತ್ತಿದೆ.

ಈ ಯೋಜನೆಯಡಿ ಮಹಿಳಾ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಪ್ರಮುಖ ಪಾತ್ರವಹಿಸುತ್ತಿದ್ದಾರೆ. ಅವರು ನಿಗದಿತ ಪ್ರದೇಶಗಳಲ್ಲಿ ನಿರಂತರ ಗಸ್ತು ತಿರುಗಿ ಮಹಿಳೆಯರ ಸುರಕ್ಷತೆಯ ಮೇಲೆ ನಿಗಾ ವಹಿಸುತ್ತಾರೆ. ಕೆಲವು ಜಿಲ್ಲೆಗಳಲ್ಲಿ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ವಸಹಾಯ ಸಂಘಗಳ ಮಹಿಳೆಯರು ಹಾಗೂ ಸ್ಥಳೀಯ ಮಹಿಳಾ ಸ್ವಯಂಸೇವಕರನ್ನು ಒಳಗೊಂಡ ಸಮಿತಿಗಳನ್ನು ರಚಿಸಲಾಗಿದ್ದು, ಗ್ರಾಮ ಮತ್ತು ವಾರ್ಡ್ ಮಟ್ಟದಲ್ಲೇ ಮಹಿಳೆಯರ ಸಮಸ್ಯೆಗಳನ್ನು ಗುರುತಿಸಿ ತಕ್ಷಣ ಸ್ಪಂದಿಸುವ ವ್ಯವಸ್ಥೆ ರೂಪಿಸಲಾಗಿದೆ.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ 'ಅಕ್ಕ ಪಡೆ'ಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಂಡಿದ್ದಾರೆ. ಮಹಿಳೆಯರ ವಿರುದ್ಧ ನಡೆಯುವ ಅಪರಾಧಗಳನ್ನು ತಡೆಗಟ್ಟುವುದು, ಸಾರ್ವಜನಿಕ ಸ್ಥಳಗಳಲ್ಲಿ ಸುರಕ್ಷಿತ ವಾತಾವರಣ ನಿರ್ಮಿಸುವುದು ಹಾಗೂ ಮಹಿಳೆಯರಲ್ಲಿ ಕಾನೂನು ಅರಿವು ಹೆಚ್ಚಿಸುವ ನಿಟ್ಟಿನಲ್ಲಿ ಈ ತಂಡ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ.

ಬಸವಕಲ್ಯಾಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಹಿಳೆಯರ ಶಕ್ತಿ ಮತ್ತು ಸಾಮರ್ಥ್ಯವನ್ನು ಕೊಂಡಾಡಿದರು. "ಹೆಣ್ಣೆಂದರೆ ಶಕ್ತಿ, ಹೆಣ್ಣೆಂದರೆ ಒಗ್ಗಟ್ಟು, ಹೆಣ್ಣೆಂದರೆ ಭರವಸೆ. ನಾರಿಶಕ್ತಿಯೇ ಈ ದೇಶದ ನಿಜವಾದ ಶಕ್ತಿ. ನಮ್ಮ ರಾಜ್ಯದಲ್ಲಿ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ಸಾಧನೆ ಮಾಡಿದ್ದಾರೆ. ಸಮಾಜದಲ್ಲಿ ಮಹಿಳೆಯರ ಪಾತ್ರವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ 'ಅಕ್ಕ ಪಡೆ'ಯಂತಹ ಕಾರ್ಯಕ್ರಮಗಳನ್ನು ಸರ್ಕಾರ ಬೆಂಬಲಿಸುತ್ತಿದೆ" ಎಂದು ಹೇಳಿದರು.

'ಅಕ್ಕ ಪಡೆ'ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳೆಯರ ಧೈರ್ಯ, ಸೇವಾ ಮನೋಭಾವ ಮತ್ತು ಸಾಮಾಜಿಕ ಕಾಳಜಿಯನ್ನು ಶ್ಲಾಘಿಸಿದ ಮುಖ್ಯಮಂತ್ರಿ, "ನಿಮ್ಮ ಹೋರಾಟ, ನಿಮ್ಮ ಧೈರ್ಯ ಮತ್ತು ನಿಮ್ಮ ಸೇವೆಗೆ ಖಂಡಿತ ಫಲ ಸಿಗುತ್ತದೆ. ಸಮಾಜದಲ್ಲಿ ಬದಲಾವಣೆ ತರಲು ನಿಮ್ಮಂತಹ ಸಂಘಟನೆಗಳು ಅತ್ಯಂತ ಅಗತ್ಯ. ಈ ಸಂಘಟನೆ ಕೇವಲ ತಾಲೂಕು ಅಥವಾ ಜಿಲ್ಲಾ ಮಟ್ಟಕ್ಕೆ ಸೀಮಿತವಾಗದೆ ರಾಜ್ಯದ ಪ್ರತಿಯೊಂದು ಗ್ರಾಮ ಪಂಚಾಯಿತಿಗೂ ವಿಸ್ತರಿಸಬೇಕು" ಎಂದು ಕರೆ ನೀಡಿದರು.

ಇದೇ ವೇಳೆ ಸರ್ಕಾರ ರೂಪಿಸುತ್ತಿರುವ 'ಭಾರತ್ ಜೋಡೋ ಯುವಶಕ್ತಿ ಸಂಘ'ದ ಉಲ್ಲೇಖ ಮಾಡಿದ ಅವರು, ಯುವಕರು ಮತ್ತು ಮಹಿಳೆಯರನ್ನು ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ವಿವಿಧ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ ಎಂದು ಹೇಳಿದರು. "ಅಕ್ಕ ಪಡೆ ಜೊತೆಗೆ ಸರ್ಕಾರ ಸದಾ ಇರುತ್ತದೆ. ಮಹಿಳೆಯರ ಸುರಕ್ಷತೆ, ಗೌರವ ಮತ್ತು ಸಬಲೀಕರಣಕ್ಕೆ ಯಾವುದೇ ರಾಜಿ ಇಲ್ಲ" ಎಂದು ಅವರು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಜನಪ್ರತಿನಿಧಿಗಳು, ಪೊಲೀಸ್ ಇಲಾಖೆ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಬ್ಬಂದಿ, ವಿವಿಧ ಮಹಿಳಾ ಸಂಘಟನೆಗಳ ಸದಸ್ಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ಮಹಿಳೆಯರ ಸುರಕ್ಷತೆ ಮತ್ತು ಸಮಾಜದಲ್ಲಿ ಅವರ ಆತ್ಮವಿಶ್ವಾಸವನ್ನು ಹೆಚ್ಚಿಸುವ ನಿಟ್ಟಿನಲ್ಲಿ 'ಅಕ್ಕ ಪಡೆ' ಮಹತ್ವದ ಪಾತ್ರ ವಹಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಲಾಯಿತು.

ಮಹಿಳೆಯರ ಸುರಕ್ಷತೆ, ಆತ್ಮರಕ್ಷಣೆ, ಕಾನೂನು ಅರಿವು ಮತ್ತು ಸಾಮಾಜಿಕ ಸಬಲೀಕರಣಕ್ಕೆ 'ಅಕ್ಕ ಪಡೆ' ಯೋಜನೆ ಹೊಸ ದಿಕ್ಕು ನೀಡುವ ಮಹತ್ವದ ಹೆಜ್ಜೆಯಾಗಿದ್ದು, ಈ ಯೋಜನೆಯನ್ನು ರಾಜ್ಯದ ಪ್ರತಿಯೊಂದು ಪಂಚಾಯಿತಿ ಮಟ್ಟಕ್ಕೂ ವಿಸ್ತರಿಸುವ ಮೂಲಕ ಮಹಿಳೆಯರಿಗೆ ಮತ್ತಷ್ಟು ಸುರಕ್ಷಿತ ಮತ್ತು ಆತ್ಮವಿಶ್ವಾಸದ ವಾತಾವರಣ ನಿರ್ಮಿಸಲು ಸರ್ಕಾರ ಮುಂದಾಗಿದೆ.

ಸ್ಪೆಷಲ್ ಚಿತ್ರಗಳ ಮೂಲಕ ಯೋಗೀಶ್ವರ್ ಪುತ್ರ ಚಿತ್ರರಂಗಕ್ಕೆ ಎಂಟ್ರಿ

ಮಾಜಿ ಸಚಿವ ಹಾಗೂ ನಟ ಸಿ.ಪಿ. ಯೋಗೀಶ್ವರ್ ಅವರ ಪುತ್ರ ಧ್ಯಾನ್ ಯೋಗೀಶ್ವರ್ ಕನ್ನಡ ಚಿತ್ರರಂಗಕ್ಕೆ ನಾಯಕನಾಗಿ ಎಂಟ್ರಿ ಕೊಡುತ್ತಿದ್ದಾರೆ. 'ಕರ್ಣಾಟಬಲಂ ಅಜೇಯಂ' ಮತ್ತು 'ಸೈನಿಕ 2' ಸಿನಿಮಾಗಳ ಮೂಲಕ ಧ್ಯಾನ್ ಚಿತ್ರರಂಗ ಪ್ರವೇಶಿಸುತ್ತಿದ್ದು, 25 ವರ್ಷಗಳ ಬಳಿಕ ಸಿ.ಪಿ. ಯೋಗೀಶ್ವರ್ ಕೂಡ ಮತ್ತೆ ನಟನಾಗಿ ಕಮ್‌ಬ್ಯಾಕ್ ಮಾಡುತ್ತಿದ್ದಾರೆ.

ಇತ್ತೀಚೆಗೆ ನಡೆದ ಎರಡು ಸಿನಿಮಾಗಳ ಮುಹೂರ್ತ ಸಮಾರಂಭಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೇಂದ್ರ ಸಚಿವ ವಿ. ಸೋಮಣ್ಣ ಚಾಲನೆ ನೀಡಿದರು. ಡಿ.ಕೆ. ಸುರೇಶ್ ಸೇರಿದಂತೆ ಹಲವು ರಾಜಕೀಯ ನಾಯಕರು ಹಾಗೂ ಚಿತ್ರರಂಗದ ಗಣ್ಯರು ಭಾಗಿಯಾಗಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಎರಡೂ ಸಿನಿಮಾಗಳನ್ನು ಶೀಲಾ ಯೋಗೀಶ್ವರ್ ನಿರ್ಮಿಸುತ್ತಿದ್ದು, ಇದೇ ವೇಳೆ ಫಸ್ಟ್ ಲುಕ್ ಟೀಸರ್ ಕೂಡ ಬಿಡುಗಡೆ ಮಾಡಲಾಯಿತು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ನಾನು ಸಾಮಾನ್ಯವಾಗಿ ಮುಹೂರ್ತ ಕಾರ್ಯಕ್ರಮಗಳಿಗೆ ಹೋಗುವುದಿಲ್ಲ. ಯೋಗೀಶ್ವರ್ ಅವರ ಆಹ್ವಾನಕ್ಕೆ ಬಂದಿದ್ದೇನೆ. ಧ್ಯಾನ್ ಟೀಸರ್‌ನಲ್ಲಿ ಉತ್ತಮವಾಗಿ ನಟಿಸಿರುವುದು ಕಾಣುತ್ತಿದೆ. ಆತ ನನ್ನ ಮಗನಂತೆಯೇ. ಅವನ ಸಿನಿಮಾ ಪಯಣ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು. ಕೇಂದ್ರ ಸಚಿವ ವಿ. ಸೋಮಣ್ಣ ಕೂಡ ಎರಡೂ ಸಿನಿಮಾಗಳಿಗೆ ಶುಭ ಕೋರಿದರು.

ಸಿ.ಪಿ. ಯೋಗೀಶ್ವರ್ ಮಾತನಾಡಿ, 40 ವರ್ಷಗಳ ಹಿಂದೆ ನಟನಾಗಿ ಚಿತ್ರರಂಗಕ್ಕೆ ಬಂದಿದ್ದೆ. ಬಳಿಕ ರಾಜಕೀಯಕ್ಕೆ ಹೋಗಿದ್ದೆ. ಈಗ ಮತ್ತೆ ನಟನಾಗಿ ಮರಳಿದ್ದೇನೆ. ನನ್ನ ಮಗ ಧ್ಯಾನ್ ಈ ಎರಡು ಸಿನಿಮಾಗಳ ಮೂಲಕ ನಾಯಕನಾಗುತ್ತಿದ್ದಾನೆ. 'ಕರ್ಣಾಟಬಲಂ ಅಜೇಯಂ' ಮುಂದಿನ ಸಂಕ್ರಾಂತಿಗೆ ಬಿಡುಗಡೆ ಮಾಡುವ ಗುರಿಯಿದೆ. ಎರಡೂ ಸಿನಿಮಾಗಳಿಗೆ ಪ್ರೇಕ್ಷಕರ ಬೆಂಬಲ ಬೇಕು" ಎಂದು ಹೇಳಿದರು.

ಧ್ಯಾನ್ ಯೋಗೀಶ್ವರ್ ಮಾತನಾಡಿ, ನಾಯಕನಾಗಿ ಕನ್ನಡ ಚಿತ್ರರಂಗ ಪ್ರವೇಶಿಸುತ್ತಿರುವುದು ತುಂಬಾ ಖುಷಿಯಾಗಿದೆ. ಈ ಅವಕಾಶ ನೀಡಿದ ನನ್ನ ತಂದೆ-ತಾಯಿಗೆ ಧನ್ಯವಾದಗಳು. ನಟನಾಗಲು ಬೇಕಾದ ಎಲ್ಲಾ ತಯಾರಿ ಮಾಡಿಕೊಂಡಿದ್ದೇನೆ. ನಾಗಣ್ಣ ಹಾಗೂ ಪುನೀತ್ ರುದ್ರನಾಗ್ ಅವರಿಂದ ಸಾಕಷ್ಟು ಕಲಿಯುತ್ತಿದ್ದೇನೆ. ನನ್ನ ಮೊದಲ ಪ್ರಯತ್ನಕ್ಕೆ ನಿಮ್ಮೆಲ್ಲರ ಆಶೀರ್ವಾದ ಮತ್ತು ಬೆಂಬಲ ಇರಲಿ ಎಂದು ಮನವಿ ಮಾಡಿದರು.

ರಾಮ ಮಂದಿರ ಹುಂಡಿ ಎಣಿಕೆ ಲೂಟಿ ಮಧ್ಯೆ ಅನುಮಾನಕ್ಕೆ ಎಡೆ ಮಾಡಿಕೊಟ್ಟ ಅಂಜನಾದ್ರಿ ಹುಂಡಿ ಎಣಿಕೆ

ಕೊಪ್ಪಳ: ಅಯೋಧ್ಯೆಯ ರಾಮ ಮಂದಿರದ ಹುಂಡಿ ಎಣಿಕೆ ವೇಳೆ ಹಣ ದುರ್ಬಳಕೆ ನಡೆದಿದೆ ಎಂಬ ಆರೋಪಗಳು ದೇಶಾದ್ಯಂತ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ, ಇದೀಗ ಹನುಮ ಜನ್ಮಸ್ಥಳವೆಂದು ನಂಬಲಾಗುವ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಪ್ರಸಿದ್ಧ ಅಂಜನಾದ್ರಿ ಬೆಟ್ಟದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಹುಂಡಿ ಎಣಿಕೆ ಪ್ರಕ್ರಿಯೆಯೂ ಸಾರ್ವಜನಿಕರಲ್ಲಿ ಹಲವು ಅನುಮಾನಗಳಿಗೆ ಕಾರಣವಾಗಿದೆ. ಜುಲೈ 3ರಂದು ಹುಂಡಿ ಎಣಿಕೆ ಕಾರ್ಯ ಪೂರ್ಣಗೊಂಡಿದ್ದರೂ, ನಾಲ್ಕು ದಿನಗಳ ಕಾಲ ಯಾವುದೇ ಅಧಿಕೃತ ಮಾಹಿತಿ ನೀಡದೇ ತಾಲೂಕು ಆಡಳಿತ ಮೌನ ವಹಿಸಿ, ಜುಲೈ 7ರಂದು ತಡವಾಗಿ ಪತ್ರಿಕಾ ಪ್ರಕಟಣೆ ಹೊರಡಿಸಿರುವುದು ಭಕ್ತರು, ಸಾರ್ವಜನಿಕರು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿದೆ.

ಸಾಮಾನ್ಯವಾಗಿ ದೇವಸ್ಥಾನಗಳ ಹುಂಡಿ ಎಣಿಕೆ ಕಾರ್ಯ ಮುಗಿದ ಕೂಡಲೇ ಎಣಿಕೆಯಲ್ಲಿ ಸಂಗ್ರಹವಾದ ಒಟ್ಟು ಮೊತ್ತ, ಚಿನ್ನ-ಬೆಳ್ಳಿ, ವಿದೇಶಿ ಕರೆನ್ಸಿ ಸೇರಿದಂತೆ ಎಲ್ಲಾ ಮಾಹಿತಿಯನ್ನು ದೇವಸ್ಥಾನ ಆಡಳಿತ ಅಥವಾ ಸಂಬಂಧಿತ ಇಲಾಖೆ ಅಧಿಕೃತವಾಗಿ ಮಾಧ್ಯಮಗಳಿಗೆ ಬಿಡುಗಡೆ ಮಾಡುವುದು ರೂಢಿಯಾಗಿದೆ. ಆದರೆ ಈ ಬಾರಿ ಅಂಜನಾದ್ರಿ ದೇವಸ್ಥಾನದ ಹುಂಡಿ ಎಣಿಕೆ ಪೂರ್ಣಗೊಂಡಿದ್ದರೂ ನಾಲ್ಕು ದಿನಗಳ ಕಾಲ ಯಾವುದೇ ಮಾಹಿತಿ ಪ್ರಕಟಿಸದಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಅಯೋಧ್ಯೆ ರಾಮ ಮಂದಿರದ ಹುಂಡಿ ವಿವಾದದ ನಡುವೆಯೇ ಈ ಬೆಳವಣಿಗೆ ನಡೆದಿರುವುದರಿಂದ ಭಕ್ತರು ಹೆಚ್ಚಿನ ಪಾರದರ್ಶಕತೆ ಆಗತ್ಯವಿದೆ ಎಂದು ಆಗ್ರಹಿಸುತ್ತಿದ್ದಾರೆ.

ಜುಲೈ 3ರಂದು ತಾಲೂಕು ಆಡಳಿತದ ಅಧಿಕಾರಿಗಳು, ದೇವಸ್ಥಾನದ ಸಿಬ್ಬಂದಿ ಹಾಗೂ ವಿವಿಧ ಇಲಾಖೆಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆಸಲಾಗಿತ್ತು. ಭಕ್ತರು ಅಪಾರ ಸಂಖ್ಯೆಯಲ್ಲಿ ಸಲ್ಲಿಸಿದ್ದ ಕಾಣಿಕೆಯನ್ನು ಎಣಿಸುವ ಕಾರ್ಯ ಹಲವು ಗಂಟೆಗಳ ಕಾಲ ನಡೆದಿದ್ದು, ಬಳಿಕ ನಾಲ್ಕು ದಿನಗಳ ಕಾಲ ಯಾವುದೇ ಅಧಿಕೃತ ಮಾಹಿತಿ ಹೊರಬರಲಿಲ್ಲ. ಇದರಿಂದ ಹುಂಡಿ ಎಣಿಕೆ ಪ್ರಕ್ರಿಯೆಯಲ್ಲಿ ವಿಳಂಬಕ್ಕೆ ಕಾರಣವೇನು ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಇದಕ್ಕೂ ಮೊದಲು ಇದೇ ವರ್ಷದ ಮಾರ್ಚ್ 23ರಂದು ದೇವಸ್ಥಾನದ ಹುಂಡಿ ಎಣಿಕೆ ನಡೆಸಲಾಗಿತ್ತು. ಆ ನಂತರ ಕಳೆದ 94 ದಿನಗಳ ಅವಧಿಯಲ್ಲಿ ದೇಶ-ವಿದೇಶಗಳಿಂದ ಸಾವಿರಾರು ಭಕ್ತರು ಅಂಜನಾದ್ರಿ ಬೆಟ್ಟಕ್ಕೆ ಆಗಮಿಸಿ ಶ್ರೀ ಆಂಜನೇಯ ಸ್ವಾಮಿಗೆ ಭಕ್ತಿಭಾವದಿಂದ ಕಾಣಿಕೆ ಸಲ್ಲಿಸಿದ್ದರು. ಜುಲೈ 3ರಂದು ನಡೆದ ಎಣಿಕೆಯಲ್ಲಿ ಒಟ್ಟು 71,77,460 ನಗದು ಹಣ ಸಂಗ್ರಹವಾಗಿರುವುದಾಗಿ ತಾಲೂಕು ಆಡಳಿತ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ. ಕೇವಲ ಮೂರು ತಿಂಗಳಿಗೂ ಕಡಿಮೆ ಅವಧಿಯಲ್ಲಿ ಇಷ್ಟು ದೊಡ್ಡ ಪ್ರಮಾಣದ ಕಾಣಿಕೆ ಸಂಗ್ರಹವಾಗಿರುವುದು ದೇವಸ್ಥಾನದ ಮೇಲೆ ಭಕ್ತರಿಗಿರುವ ಅಪಾರ ನಂಬಿಕೆ ಮತ್ತು ಭಕ್ತಿಭಾವವನ್ನು ಪ್ರತಿಬಿಂಬಿಸುತ್ತದೆ.

ಈ ಬಾರಿ ಹುಂಡಿಯಲ್ಲಿ ಭಾರತೀಯ ಕರೆನ್ಸಿಯ ಜೊತೆಗೆ ವಿದೇಶಿ ಕರೆನ್ಸಿಯೂ ಗಮನಾರ್ಹ ಪ್ರಮಾಣದಲ್ಲಿ ಪತ್ತೆಯಾಗಿದೆ. ನೇಪಾಳ, ಅಮೆರಿಕ (ಯುನೈಟೆಡ್ ಸ್ಟೇಟ್ಸ್ ಆಫ್ ಅಮೆರಿಕಾ), ಥೈಲ್ಯಾಂಡ್ ಹಾಗೂ ಹಾಂಗ್ ಕಾಂಗ್ ಸೇರಿದಂತೆ ಹಲವು ದೇಶಗಳ ಕರೆನ್ಸಿ ನೋಟುಗಳು ಹುಂಡಿಯಲ್ಲಿ ಲಭ್ಯವಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಿದೇಶಗಳಲ್ಲಿ ನೆಲೆಸಿರುವ ಭಾರತೀಯರು ಹಾಗೂ ವಿದೇಶಿ ಭಕ್ತರು ಸಹ ಅಂಜನಾದ್ರಿಗೆ ಆಗಮಿಸಿ ಕಾಣಿಕೆ ಸಲ್ಲಿಸುತ್ತಿರುವುದು ದೇವಸ್ಥಾನದ ಜಾಗತಿಕ ಖ್ಯಾತಿಗೆ ಸಾಕ್ಷಿಯಾಗಿದೆ ಎಂದು ಹೇಳಲಾಗಿದೆ.

ರಾಮಾಯಣದ ಪೌರಾಣಿಕ ಹಿನ್ನೆಲೆಯ ಪ್ರಕಾರ ಅಂಜನಾದ್ರಿ ಬೆಟ್ಟವನ್ನು ಹನುಮಂತನ ಜನ್ಮಸ್ಥಳವೆಂದು ನಂಬಲಾಗುತ್ತದೆ. ಈ ಕಾರಣದಿಂದ ದೇಶದ ವಿವಿಧ ರಾಜ್ಯಗಳಿಂದ ಮಾತ್ರವಲ್ಲದೆ ವಿದೇಶಗಳಿಂದಲೂ ಲಕ್ಷಾಂತರ ಭಕ್ತರು ಪ್ರತಿವರ್ಷ ಈ ಕ್ಷೇತ್ರಕ್ಕೆ ಭೇಟಿ ನೀಡುತ್ತಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ರಾಜ್ಯ ಸರ್ಕಾರ ಹಾಗೂ ಪ್ರವಾಸೋದ್ಯಮ ಇಲಾಖೆ ಅಂಜನಾದ್ರಿ ಬೆಟ್ಟದ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಿದ್ದು, ರಸ್ತೆ, ಮೆಟ್ಟಿಲು, ಕುಡಿಯುವ ನೀರು, ಬೆಳಕು ಸೇರಿದಂತೆ ವಿವಿಧ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗಿದೆ. ಇದರಿಂದ ಭಕ್ತರ ಸಂಖ್ಯೆಯಲ್ಲೂ ಗಣನೀಯ ಏರಿಕೆ ಕಂಡುಬಂದಿದ್ದು, ದೇವಸ್ಥಾನದ ಹುಂಡಿ ಆದಾಯವೂ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ.

ಆದಾಗ್